# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1632** |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಗೋವಿಂದ ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 11.03.2022 |
| ಉತ್ತರಿಸುವ ಸಚಿವರು | : | ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಕಳೆದ ಮೂರು ವರ್ಷದಿಂದ ಕೋಲಾರ ಜಿಲ್ಲೆಯಲ್ಲಿ ಎಷ್ಟು ಕ್ವಿಂಟಾಲ್ ರಾಗಿ ಖರೀದಿ ಮಾಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು) | ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ಕಳೆದ ಮೂರು ವರ್ಷಗಳಲ್ಲಿ ಕೋಲಾರ ಜಿಲ್ಲೆಯಲ್ಲಿ ಖರೀದಿಸಲಾದ ರಾಗಿಯ ಪ್ರಮಾಣ ಈ ಕೆಳಗಿನಂತಿದೆ.<br>ವರ್ಷ — ಪ್ರಮಾಣ (ಕ್ವಿಂಟಾಲ್ ಗಳಲ್ಲಿ)<br>2018-19 — 3,146.67<br>2019-20 — 33,438.97<br>2020-21 — 1,51,915.81<br>ತಾಲ್ಲೂಕುವಾರು ವಿವರ ಅನುಬಂಧದಲ್ಲಿ ಒದಗಿಸಲಾಗಿದೆ |
| ಆ. | ಖರೀದಿ ಮಾಡಿದ್ದಲ್ಲಿ, ಕಳೆದ ಮೂರು ವರ್ಷದಿಂದ ಸರ್ಕಾರ ಒದಗಿಸಿರುವ ಅನುದಾನವೆಷ್ಟು; | ಕೋಲಾರ ಜಿಲ್ಲೆಯಲ್ಲಿ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಖರೀದಿಸಲಾದ ರಾಗಿಗೆ ಸಂಬಂಧಿಸಿದಂತೆ ಕಳೆದ ಮೂರು ವರ್ಷಗಳಲ್ಲಿ ಈ ಕೆಳಕಂಡಂತೆ ಹಣವನ್ನು ಪಾವತಿಸಲಾಗಿದೆ.<br>ವರ್ಷ — ಅನುದಾನ (ಕೋಟಿಗಳಲ್ಲಿ)<br>2018-19 — ರೂ.0.92<br>2019-20 — ರೂ.10.61<br>2020-21 — ರೂ.50.72 |
| ಇ. | ಈ ಯೋಜನೆಯಡಿಯಲ್ಲಿ ಎಷ್ಟು ಕ್ವಿಂಟಾಲ್ ವರೆಗೂ ರಾಗಿ ಖರೀದಿಗೆ ಬೇಂಬಲ ಬೆಲೆ ನೀಡಲಾಗುವುದು; | ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ಕಳೆದ ಮೂರು ವರ್ಷಗಳಲ್ಲಿ ಪ್ರತಿ ರೈತರಿಂದ ರಾಗಿ ಖರೀದಿಸಲು ನಿಗದಿಗೊಳಿಸಲಾಗಿದ್ದ ಪ್ರಮಾಣ ಈ ಕೆಳಗಿನಂತಿದೆ.<br>ವರ್ಷ — ಪ್ರತಿ ಎಕರೆಗೆ — ಗರಿಷ್ಟ ಪ್ರಮಾಣ<br>2018-19 — 10 ಕ್ವಿಂಟಾಲ್ — 75 ಕ್ವಿಂಟಾಲ್<br>2019-20 — 10 ಕ್ವಿಂಟಾಲ್ — 50 ಕ್ವಿಂಟಾಲ್<br>2020-21 — 10 ಕ್ವಿಂಟಾಲ್ — 50 ಕ್ವಿಂಟಾಲ್ |

| | | |
|---|---|---|
| ಈ. | ರಾಗಿ ಖರೀದಿ ಕೇಂದ್ರದಲ್ಲಿ 50 ಕೆ.ಜಿ ಪ್ರತಿ ಖಾಲಿ ಚೀಲಕ್ಕೆ ರೂ.10 ಹಾಗೂ ರಾಗಿ ಗುಣಮಟ್ಟ ಪರಿಶೀಲನೆ ಮಾಡಲು ರೂ.200 ರಿಂದ 300 ರೂಪಾಯಿಗಳನ್ನು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲ್ಲ. |
| ಉ. | ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ಉದ್ಭವಿಸುವುದಿಲ್ಲ |

ಆನಾಸ 65 ಆರ್‌ಪಿಆರ್ 2022 (ಇ-ಆಫೀಸ್)

(ಉಮೇಶ ವಿ. ಕತ್ತಿ)
ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.